ಆ) ಆಯಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳ ಬೈಲಾದಂತೆ ಹಾಗೂ ಕರ್ನಾಟಕ ನಾಗರೀಕ ಸೇವೆಗಳ ನಿಯಮ 313ರ ರೀತಿ ತಾತ್ಕಾಲಿಕ ವ್ಯವಸ್ಥೆಯಾಗಿ (06 ತಿಂಗಳುಗಳಿಗೆ) ನೇಮಕಾತಿಯನ್ನು ಸೀಮಿತಗೊಳಿಸಿ ನಿವೃತ್ತ ಸಿಬ್ಬಂದಿಯನ್ನು ನೇಮಿಸಿಕೊಳ್ಳಲಾಗಿದೆ.

ಇ) ಇದೊಂದು ತಾತ್ಕಲಿಕ ವ್ಯವಸ್ಥೆಯಾಗಿದ್ದು ನಿಯಮಾನುಸಾರ ಖಾಯಂ ಸಿಬ್ಬಂದಿ ನೇಮಕವಾದ ನಂತರ ಇದನ್ನು ನಿಲ್ಲಿಸಲಾಗುವುದು.

ವೈದ್ಯಕೀಯ ಕೊರತೆ

862(358); ಶ್ರೀ ಡಾ॥ ರಫೀಕ್ ಅಹ್ಮದ್ ಎಸ್. (ತುಮಕೂರು ನಗರ)

ಅ) ತುಮಕೂರಿಗೆ ಈ ಹಿಂದೆ ಮಂಜೂರಾಗಿದ್ದ ಸರ್ಕಾರಿ ವೈದ್ಯಕೀಯ ಕಾಲೇಜು ರದ್ದುಗೊಂಡ ಹಿನ್ನೆಲೆಯಲ್ಲಿ ಕಾಲೇಜಿನ ಪುನರ್ ಮಂಜೂರಾತಿಗಾಗಿ ತೆಗೆದುಕೊಂಡ ಕ್ರಮಗಳೇನು;

ಆ) ಹಾಗಿದ್ದಲ್ಲಿ, ಮಂಜೂರಾತಿ ಆದೇಶ ಯಾವ ಕಾಲಮಿತಿಯಲ್ಲಿ ಹೊರಡಿಸಲಾಗುತ್ತದೆ.

ಇ) 2014–15ನೇ ಸಾಲಿಗೆ ವೈದ್ಯಕೀಯ ಮಂಡಳಿ (ದೆಹಲಿ) ಯಿಂದ ಸರ್ಕಾರಿ ವೈದ್ಯಕೀಯ ಕಾಲೇಜಿಗೆ ಶಿಫಾರಸ್ಸು ಪಡೆಯಲು ಯಾವ ಕ್ರಮಕೈಗೊಳ್ಳಲಾಗಿದೆ?

ಡಾ॥ ಶರಣಪ್ರಕಾಶ ಆರ್. ಪಾಟೀಲ್ (ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು)

ಅ) 2013–14ನೇ ಸಾಲಿನ ಪರಿಷ್ಕೃತ ಆಯವ್ಯಯದ ಘೋಷಣೆಯಂತೆ, ಚಾಮರಾಜನಗರ, ಕೊಡಗು, ಕಾರವಾರ, ಕೊಪ್ಪಳ, ಗದಗ ಮತ್ತು ಗುಲ್ಬರ್ಗಾ ಇಲ್ಲಿ ಹೊಸ 06 ವೈದ್ಯಕೀಯ ಕಾಲೇಜುಗಳನ್ನು 2014–15ನೇ ಸಾಲಿನಿಂದ 150 ಎಂ.ಬಿ.ಬಿ.ಎಸ್. ವಿದ್ಯಾರ್ಥಿಗಳ ಪ್ರವೇಶ ಸಾಮರ್ಥ್ಯದೊಂದಿಗೆ ಹೊಸದಾಗಿ ಪ್ರಾರಂಭಿಸಲು ಮಂಜೂರಾತಿ ನೀಡಲಾಗಿದೆ.

ಆ) ಮತ್ತು ಇ) ಆಯಾ ಜಿಲ್ಲೆಗಳಲ್ಲಿ ಲಭ್ಯವಿರುವ ಮೂಲಭೂತ ಸೌಲಭ್ಯಗಳ ಲಭ್ಯತೆಯನ್ನಾಧರಿಸಿ ಹಾಗೂ ಅನುದಾನದ ಲಭ್ಯತೆಗನುಗುಣವಾಗಿ ಜಿಲ್ಲೆಗೊಂದು ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಬೇಕೆಂಬುವುದು ಸರ್ಕಾರದ ಉದ್ದೇಶವಾಗಿದೆ.

ಅದರಂತೆ ತುಮಕೂರು ವೈದ್ಯಕೀಯ ಕಾಲೇಜಿನ ಸ್ಥಾಪನೆಗೆ ಭಾರತೀಯ ವೈದ್ಯಕೀಯ ಪರಿಷತ್ತು ಕೋರಿರುವ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸಿಕೊಂಡು, ಮುಂಬರುವ ಶೈಕ್ಷಣಿಕ ವರ್ಷಗಳಲ್ಲಿ ಆಯವ್ಯಯ ಲಭ್ಯತೆಯ ಅನುಸಾರವಾಗಿ ವೈದ್ಯಕೀಯ ಕಾಲೇಜನ್ನು ಸ್ಥಾಪಿಸುವ ಬಗ್ಗೆ ಪರಿಶೀಲಿಸಲಾಗುವುದು.

864(360); ಡಾ॥ ರಫೀಕ್ ಅಹ್ಮದ್ ಎಸ್ (ತುಮಕೂರು ನಗರ)

ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವಿದ್ಯಾರ್ಥಿನಿಲಯಗಳ ನಿರ್ಮಾಣಕ್ಕೆ ಮಂಜೂರಾದ ಹಣವೆಷ್ಟು;

ಆ) ವಿದ್ಯಾರ್ಥಿನಿಲಯದ ಕಟ್ಟಡಗಳ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿದೆ;

ಇ) ಹಾಸ್ಟೆಲ್ ಒಟ್ಟು ಪ್ರದೇಶ ಮಿತಿ ಮತ್ತು ದಾಖಿಲಾತಿ ವಿವರಗಳನ್ನು ಒದಗಿಸುವುದು;

ಈ) ವಿದ್ಯಾರ್ಥಿಯರ ನಿಲಯಕ್ಕೆ ಹೆಚ್ಚಿನ ಸೌಲಭ್ಯಕ್ಕಾಗಿ ನೀಡಲಾದ ಹಣವೆಷ್ಟು; ಕಾದಿರಿಸಲಾದ ಹಣವೆಷ್ಟು; (ವಿವರ ಒದಗಿಸುವುದು)?